# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಹೇಮಾವತಿ ಯೋಜನೆಯ ತುಮಕೂರು ಶಾಖಾ ನಾಲೆಯಿಂದ ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಆಯ್ದ 26 ಕೆರೆಗಳಿಗೆ ಕುಡಿಯುವ ನೀರನ್ನು ಒದಗಿಸುವ ಯೋಜನೆಯಲ್ಲಿನ ಉಳಿಕೆ ಕಾಮಗಾರಿ ಮತ್ತು ಹೆಚ್ಚುವರಿ ಅಡ್ಡಮೋರಿ ಕಾಮಗಾರಿಗಳ ರೂ.98.50 ಕೋಟಿಗಳ ಮೊತ್ತದ ಅಂದಾಜು ಪ್ರಸ್ತಾವನೆಗೆ ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ.

** ** **

ಓದಲಾಗಿದೆ :-

1. ಸರ್ಕಾರದ ಆದೇಶ ಸಂಖ್ಯೆ:ಜಸಂಇ 74 ಎನ್ ಹೆಚ್ ಪಿ 2009, ದಿನಾಂಕ: 20-07-2011
2. ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ, ಬೆಂಗಳೂರು ಇವರ ಕಛೇರಿ ಟಿಪ್ಪಣಿ ಸಂಖ್ಯೆ:CNNL/TECH-4/C.N.Halli-288/Vol-6/2020-21, ದಿನಾಂಕ:27.01.2021.
3. ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ, ಬೆಂಗಳೂರು ಇವರ ಪತ್ರ ಸಂಖ್ಯೆ: ಸಂಖ್ಯೆ:ಕಾನೀನಿ/ತಾಂತ್ರಿಕ-4/94/2020-21/2953, ದಿನಾಂಕ:03.03.2021.
4. ಸರ್ಕಾರದ ಪತ್ರ ಸಂಖ್ಯೆ:ಜಸಂಇ 15 ಎನ್‌ಹೆಚ್‌ಪಿ 2021 ದಿನಾಂಕ:24.03.2021
5. ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ, ಬೆಂಗಳೂರು ಇವರ ಪತ್ರ ಸಂಖ್ಯೆCNNL/TECH-4/TUM-194/CNH balance work/Part-A,/2021-22, ದಿನಾಂಕ:21.04.2021.
6. ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ, ಬೆಂಗಳೂರು ಇವರ ಪತ್ರ ಸಂಖ್ಯೆCNNL/TECH- 4/TUM-194/CNH balance work/Part-A,/2021-22, 582, ದಿನಾಂಕ:22.07.2021.
7. ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ, ಬೆಂಗಳೂರು ಇವರ ಪತ್ರ ಸಂಖ್ಯೆ:ಕಾನೀನಿ/ತಾಂತ್ರಿಕ--4/C.N.Halli-288/2021-22/793, ದಿನಾಂಕ:09.08.2021.

ಪ್ರಸ್ತಾವನೆ :-

ಮೇಲೆ ಓದಲಾದ (1) ರ ಸರ್ಕಾರದ ಆದೇಶದಲ್ಲಿ, ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಗ್ರಾಮಗಳ ತೀವ್ರವಾದ ಕುಡಿಯುವ ನೀರಿನ ಸಮಸ್ಯೆಯನ್ನು ಪರಿಹರಿಸಲು, ತುಮಕೂರು ಶಾಖಾ ನಾಲೆಯ ಸರಪಳಿ 45.15 ಕಿ.ಮೀ ನಿಂದ ಗುರುತ್ವಾಕರ್ಷಣೆ ಮೂಲಕ 22 ಕೆರೆಗಳಿಗೆ ಹಾಗೂ ತುಮಕೂರು ಶಾಖಾ ನಾಲೆಯ ಸರಪಳಿ 48.17ಕಿ.ಮೀ ನಿಂದ ನೀರೆತ್ತುವ ಮೂಲಕ 4 ಕೆರೆಗಳಿಗೆ, ಹೀಗೆ ಒಟ್ಟಾರೆ ಆಯ್ದ 26 ಕೆರೆಗಳಿಗೆ 0.781 ಟಿ.ಎಂ.ಸಿ. ನೀರನ್ನು ಕುಡಿಯುವ ಉದ್ದೇಶಕ್ಕಾಗಿ ಹರಿಸುವ ಯೋಜನೆಯ ಕಾಮಗಾರಿಯ ರೂ.102.60 ಕೋಟಿ ಮೊತ್ತದ ಅಂದಾಜಿಗೆ ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿತ್ತು.

2. ಮೇಲೆ ಓದಲಾದ (2),(3) ಪತ್ರಗಳಲ್ಲಿ, ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ, ಇವರು, ಭೂಸ್ವಾಧೀನ ಪ್ರಕ್ರಿಯೆಯಲ್ಲಿನ ವಿಳಂಬ ಹಾಗೂ ಕಾಮಗಾರಿಗೆ ಸ್ಥಳವನ್ನು ಹಸ್ತಾಂತರಿಸದೇ ಇರುವ ಕಾರಣದಿಂದ ಕಾಮಗಾರಿಯನ್ನು ಪೂರ್ಣಗೊಳಿಸಲು ಸಾಧ್ಯವಾಗಿರುವುದಿಲ್ಲವಾದ್ದರಿಂದ, ಗುತ್ತಿಗೆದಾರರು ಕಾಮಗಾರಿಯನ್ನು Foreclosure ಮಾಡಲು ನ್ಯಾಯಾಲಯದ ಮೊರೆ ಹೋಗಿರುತ್ತಾರೆ; ಕಾಮಗಾರಿಯಲ್ಲಿ ಪ್ರಸ್ತುತ ಸಾಸಲು ಕೆರೆಯವರೆಗೆ ಬಹುತೇಕ ಭೂಸ್ವಾಧೀನ ಪ್ರಕ್ರಿಯೆ ಪೂರ್ಣಗೊಂಡಿರುವುದರಿಂದ, ಈವರೆವಿಗೆ ಕಾಮಗಾರಿಯನ್ನು ಪೂರ್ಣಗೊಳಿಸಲು ಕ್ರಮ ಕೈಗೊಂಡಿದ್ದು, ಅದರಂತೆ ಸಾಸಲು ಕೆರೆಯವರೆಗೆ ನೀರನ್ನು ಹರಿಸಲಾಗಿರುತ್ತದೆ; ನಂತರ ಗುತ್ತಿಗೆದಾರರ ದಾವೆಯನ್ನು ಟೆಂಡರ್ ನಿಯಮಾವಳಿಯಂತೆ ಪರಿಗಣಿಸಿ ಕಂಡಿಕೆ -50 ರಂತೆ ಕ್ರಮಕ್ಕೈಗೊಳ್ಳಲು, ಸದರಿ ಕಾಮಗಾರಿಯ Foreclosure

...2

ಪ್ರಸ್ತಾವನೆಗೆ ದಿನಾಂಕ:29-12-2020 ರಂದು ನಡೆದ ತಾಂತ್ರಿಕ ಉಪಸಮಿತಿಯಿಂದ ತೀರುವಳಿ ಪಡೆಯಲಾಗಿರುತ್ತದೆ ಹಾಗೂ ಸರ್ಕಾರದ ಉಲ್ಲೇಖಿತ-(4)ರಲ್ಲಿನ ದಿನಾಂಕ:24-03-2021ರ ಪತ್ರದಲ್ಲಿನ ನಿರ್ದೇಶನದಂತೆ ಸದರಿ ಕಾಮಗಾರಿಯ Foreclosure ಪ್ರಸ್ತಾವನೆಯನ್ನು ಅನುಮೋದಿಸಲು ಕ್ರಮ ಕೈಗೊಳ್ಳಲಾಗಿರುತ್ತದೆ ಎಂದು ವರದಿ ಮಾಡಿರುತ್ತಾರೆ.

3. ಮೇಲೆ ಓದಲಾದ (5),(6) ಪತ್ರಗಳಲ್ಲಿ ಹೇಮಾವತಿ ಯೋಜನೆಯ ತುಮಕೂರು ಶಾಖಾ ನಾಲೆಯಿಂದ ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಆಯ್ದ 26 ಕೆರೆಗಳಿಗೆ ಕುಡಿಯುವ ನೀರನ್ನು ಒದಗಿಸುವ ಯೋಜನೆಯಲ್ಲಿನ ಉಳಿಕೆ ಕಾಮಗಾರಿ ಮತ್ತು ಹೆಚ್ಚುವರಿ ಅಡ್ಡಮೋರಿ ಕಾಮಗಾರಿಗಳ ರೂ.98.50 ಕೋಟಿಗಳ ಮೊತ್ತದ ಅಂದಾಜು ಪ್ರಸ್ತಾವನೆಗೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ರವರು ಕೋರಿರುತ್ತಾರೆ.

4. ಸದರಿ ಕಾಮಗಾರಿಗಳ ಅಂದಾಜು ಪಟ್ಟಿಗೆ ದಿನಾಂಕ:26-03-2021 ರಂದು ನಡೆದ ಕಾವೇರಿ ನೀರಾವರಿ ನಿಗಮದ ಅಂದಾಜು ಪರಿಶೀಲನಾ ಸಮಿತಿಯ 17ನೇ ಸಭೆಯಲ್ಲಿ ತೀರುವಳಿ ನೀಡಲಾಗಿದೆ; ಹಾಗೂ ಸಕ್ಷಮ ಪ್ರಾಧಿಕಾರವು ಅನುಮೋದನೆ ನೀಡಿರುವ ಕ್ರಮಕ್ಕೆ ದಿನಾಂಕ:22-07-2021 ರಂದು ನಡೆದ ಕಾವೇರಿ ನೀರಾವರಿ ನಿಗಮ ಮಂಡಳಿಯ 73ನೇ ಸಭೆಯಲ್ಲಿ ಅನುಸಮರ್ಥನೆ ನೀಡಲಾಗಿದೆ ಎಂದು ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ ಇವರು ವರದಿ ಮಾಡಿರುತ್ತಾರೆ.

5. ಸದರಿ ಪ್ರಸ್ತಾವನೆಯನ್ನು ಸರ್ಕಾರದ ಮಟ್ಟದಲ್ಲಿ ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರಿ ಆದೇಶ ಸಂಖ್ಯೆ:ಜಸಂಇ 15 ಎನ್ ಹೆಚ್ ಪಿ 2021**

**ಬೆಂಗಳೂರು, ದಿನಾಂಕ:14-09-2021**

ಹೇಮಾವತಿ ಯೋಜನೆಯ ತುಮಕೂರು ಶಾಖಾ ನಾಲೆಯಿಂದ ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಆಯ್ದ 26 ಕೆರೆಗಳಿಗೆ ಕುಡಿಯುವ ನೀರನ್ನು ಒದಗಿಸುವ ಯೋಜನೆಯ ದಿನಾಂಕ:27-02-2013ರಂದು ವಹಿಸಿರುವ ಕಾಮಗಾರಿ ಗುತ್ತಿಗೆಯನ್ನು Foreclosure ಮಾಡಿರುವುದನ್ನು ದೃಢಪಡಿಸಿಕೊಳ್ಳುವ ಷರತ್ತಿಗೊಳಪಟ್ಟು, **ಹೇಮಾವತಿ ಯೋಜನೆಯ ತುಮಕೂರು ಶಾಖಾ ನಾಲೆಯಿಂದ ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಆಯ್ದ 26 ಕೆರೆಗಳಿಗೆ ಕುಡಿಯುವ ನೀರನ್ನು ಒದಗಿಸುವ ಯೋಜನೆಯಲ್ಲಿನ ಉಳಿಕೆ ಕಾಮಗಾರಿ ಮತ್ತು ಹೆಚ್ಚುವರಿ ಅಡ್ಡಮೋರಿ ಕಾಮಗಾರಿಗಳ ರೂ.98.50 ಕೋಟಿಗಳ ಮೊತ್ತದ ಅಂದಾಜು ಪ್ರಸ್ತಾವನೆಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.**

2. ಈ ಆದೇಶವನ್ನು ಆರ್ಥಿಕ ಇಲಾಖೆಯು ತನ್ನ ಟಿಪ್ಪಣಿ ಸಂಖ್ಯೆ: ಆಇ 295 ಆಕೋ-1/2021(ಇ-ಆಫೀಸ್), ದಿನಾಂಕ:02.09.2021 ಹಾಗೂ ಯೋಜನಾ ಇಲಾಖೆಯು ತನ್ನ ಟಿಪ್ಪಣಿ ಸಂಖ್ಯೆ: ಪಿಡಿಎಸ್ 23 ಎಂಸಿಎಂ 2021 ಪಿಪಿಡಿ, ದಿನಾಂಕ:01.09.2021 ರಲ್ಲಿ ನೀಡಿರುವ ಸಹಮತಿಗಳನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ
14/09/2021
(ಮನೋಹರ ವೈ. ರೊಟ್ಟೆ)
ಸರ್ಕಾರದ ಅಧೀನ ಕಾರ್ಯದರ್ಶಿ (ತಾಂ-2)
ಜಲ ಸಂಪನ್ಮೂಲ ಇಲಾಖೆ.

ಇವರಿಗೆ :-

1. ಪ್ರಧಾನ ಮಹಾಲೇಖಪಾಲರು (ಸಾಮಾನ್ಯ ಮತ್ತು ಸಾಮಾಜಿಕ ವಲಯ ಲೆಕ್ಕ ಪರಿಶೋಧನ), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿರವರ ಆಪ್ತಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ, ವಿಕಾಸ ಸೌಧ.

...3

30

3. ಸರ್ಕಾರದ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ, ವಿಕಾಸ ಸೌಧ.
4. ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ, ಬೆಂಗಳೂರು.
5. ಮುಖ್ಯ ಇಂಜಿನಿಯರ್, ಹೇಮಾವತಿ ನಾಲಾ ವಲಯ, ತುಮಕೂರು.
6. ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ಲೋ.ಇ. ಆರ್ಥಿಕ ಕೋಶ), ವಿಧಾನ ಸೌಧ, ಬೆಂಗಳೂರು.
7. ಸರ್ಕಾರದ ಉಪ ಕಾರ್ಯದರ್ಶಿ (ಸಚಿವ ಸಂಪುಟ), ಕರ್ನಾಟಕ ಸರ್ಕಾರ (ಪ್ರಕರಣ ಸಂಖ್ಯೆ: ಸಿ:361 /2021, ದಿನಾಂಕ: 03.09.2021)
8. ನಿರ್ದೇಶಕರು, ಸಂಪೂರ್ಣ ಯೋಜನಾ ವಿಭಾಗ, ಯೋಜನೆ, ಕಾರ್ಯಕ್ರಮ ಸಂಯೋಜನೆ, ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
9. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

+++++